ಕರ್ನಾಟಕ ಸರ್ಕಾರ

ಸಂಖ್ಯೆ:ಪಪೂಶಿಇ/ಶೈಶಾ/ಸದ್ಭಾದಿ/2017-18

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ. 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: 16-08-2016.

**ಸುತ್ತೋಲೆ**

ವಿಷಯ: ದಿನಾಂಕ 19/08/2017ರ ಶನಿವಾರ "ಸದ್ಭಾವನಾ ದಿನ" ವನ್ನಾಗಿ ಮತ್ತು ದಿನಾಂಕ 20/08/2016 ರಿಂದ 02/09/2017 ರವರೆಗೆ "ಕೋಮು ಸೌಹಾರ್ದ" ಪಾಕ್ಷಿಕ (Communal Harmony Fortnight) ಅನ್ನು ಆಚರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ:ಸಿಆಸುಇ 01 ರಾಐಸ 2017 ದಿನಾಂಕ 01/08/2017.

*****

ಎಲ್ಲಾ ಧರ್ಮ, ಭಾಷೆ ಹಾಗೂ ರಾಜ್ಯಗಳ ಜನರಲ್ಲಿ ಸೌಹಾರ್ದತೆಯನ್ನು ಉತ್ತೇಜಿಸಿ ಎಲ್ಲರಲ್ಲೂ ಸದ್ಭಾವನೆಯನ್ನು ಮೂಡಿಸಿ ಹಿಂಸಾಚಾರವನ್ನು ತ್ಯಜಿಸುವಂತೆ ಮಾಡಲು ಕೇಂದ್ರ ಸರ್ಕಾರದ ಆದೇಶದಂತೆ ಪ್ರತಿ ವರ್ಷ 20ನೇ ಆಗಸ್ಟ್ ರಂದು ಸದ್ಭಾವನಾ ದಿನವನ್ನಾಗಿ ಆಚರಿಸಲಾಗುತ್ತಿತ್ತು. ಅದರಂತೆ ಈ ವರ್ಷ ದಿನಾಂಕ 20/08/2017ರಂದು ಸಾವತ್ರಿಕ ರಜಾ ದಿವಸವಾಗಿರುವದರಿಂದ 19/08/2017 ರಂದು ಸದ್ಭಾವನಾ ದಿನವನ್ನಾಗಿ ಮತ್ತು ದಿನಾಂಕ 20/08/2017 ರಿಂದ 02/09/2017ರ ವರೆಗೆ ಕೋಮು ಸೌಹಾರ್ದ ಪಾಕ್ಷಿಕ (Communal Harmony Fortnight) ವನ್ನು ರಾಜ್ಯಾದ್ಯಂತ ಆಚರಿಸಬೇಕೆಂದು ಸರ್ಕಾರವು ನಿರ್ಧರಿಸಿದೆ. ಈ ಸಂಬಂಧವಾಗಿ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಮತ್ತು ಯೂತ್ ಅಸೋಸೋಯೇಷನ್ ಸಹಕಾರದೊಂದಿಗೆ ರಾಜ್ಯದ ವಿಭಾಗ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಕಾರ್ಯಕ್ರಮವನ್ನು ಏರ್ಪಡಿಸಿ ಸದ್ಭಾವನಾ ದಿನವನ್ನು ಆಚರಿಸುವುದರೊಂದಿಗೆ ಪ್ರತಿಜ್ಞೆಯನ್ನು ಸ್ವೀಕರಿಸಬೇಕೆಂದು ಕೂಡ ಸೂಚಿಸಲಾಗಿದೆ. ಈ ಹಿನ್ನೆಲೆಯಲ್ಲಿ ದಿನಾಂಕ 19/08/2017ರಂದು ಸದ್ಭಾವನಾ ದಿನಾಚರಣೆಯನ್ನು ನಿಮ್ಮ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳಲ್ಲಿ ಆಚರಿಸಲು ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ತಿಳಿಸಿ, ಆಚರಿಸಿದ ಕುರಿತಂತೆ ಮಾಹಿತಿಯನ್ನು ಇಲಾಖೆಗೆ ನೀಡಲು ಸೂಚಿಸಿದೆ. ಮಾಹಿತಿಗಾಗಿ ಸರ್ಕಾರದ ಪತ್ರದ ಪ್ರತಿಯನ್ನು ಲಗತ್ತಿಸಿದೆ.

ಜಂಟಿ ನಿರ್ದೇಶಕರು (ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:
1. ಜಿಲ್ಲಾ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರುಗಳ ಇ-ಮೇಲ್‌ಗೆ ಅಳವಡಿಸಲು.
2. ಶಾಖಾಧಿಕಾರಿಗಳು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ವೆಬ್ ಸೈಟ್‌ಗೆ ಅಳವಡಿಸಲು.